ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ

ಸಿ.ಸಿ. 53/2024

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ08**

**ದಿನಾಂಕಃ** 23.10.2025 **ಸಿಡಬ್ಲ್ಯೂ12**

| | |
|---|---|
| ಹೆಸರು | ಸಿದ್ದೇಶ |
| ತಂದೆ ಹೆಸರು | ವಿವೇಕಾನಂದ |
| ವಯಸ್ಸು | 30 ವರ್ಷ |
| ಉದ್ಯೋಗ | ಎಲೆಕ್ಟ್ರಿಷಿಯನ್ |
| ವಾಸ ಸ್ಥಳ | ಗುತ್ತೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.11 ರವರ ಪರಿಚಯ ಇಲ್ಲ. ಸಾಕ್ಷಿಗೆ ಒಂದು ದಾಖಲೆ ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇದೆ ಎಂದು ಗುರುತಿಸಿರುತ್ತಾರೆ, ಸದರಿ ದಾಖಲೆ ವಾಹನ ಅಮಾನತ್ತು ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ.11 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.11(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು ಎರಡು ವರ್ಷದ ಹಿಂದೆ ಗುತ್ತೂರು ಗ್ರಾಮಾಂತರ ಠಾಣೆಯಲ್ಲಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ22.09.2021 ರಂದು ಪೋಲೀಸರು ನನ್ನ ಸಮಕ್ಷಮ ಪಂಚನಾಮೆ ಜರುಗಿಸಿ ಬಿಡುಗಡೆ ಮಾಡಿದ ಬೈಕನ ನಂಬರ್ ಕೆಎ-17 ಹೆಚ್ ಕೆ-9317 ನ್ನು ಬಿಡುಗಡೆ ಮಾಡಿರುತ್ತಾರೆ ಎಂದರೆ ಸರಿ. ಪಂಚನಾಮೆಯನ್ನು ಬೆಳಗ್ಗೆ 10 ರಿಂದ 10.30 ವರೆಗೆ ಜರುಗಿಸಿ ಚಾಸಾ.8 ರವರಿಗೆ ನೀಡಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ವೈ ಹೆಚ್ ಡಿ ವಕೀಲರಿಂದಃ**

ಪೋಲೀಸರು ನನಗೆ ಯಾವುದೇ ನೋಟೀಸ್ ನೀಡಿಲ್ಲ ಎಂದರೆ ಸರಿ. ನಿಪಿ.11 ಪೋಲೀಸರು ತಯಾರಿಸಿರುತ್ತಾರೆ ಎಂದರೆ ಸರಿ. ನಿಪಿ.11 ರಲ್ಲಿ ಬರೆದಿರುವ ಸಂಗತಿ ಬಗ್ಗೆ ಮಾಹಿತಿ ಇಲ್ಲ ಎಂದರೆ ಸರಿ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ